ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ
**KARNATAKA LEGISLATIVE ASSEMBLY, RESEARCH AND REFERENCE BRANCH**

## ಪತ್ರಿಕಾ ತುಣುಕುಗಳು
## PAPER CLIPPINGS

17

ಇಲಾಖೆ / ವಿಷಯ : DEPARTMENT / SUBJECT: ಪ್ರಧಾನಮಂತ್ರಿ

ಪತ್ರಿಕೆಯ ಹೆಸರು : NAME OF THE NEWS PAPER: ಕನ್ನಡ ಪ್ರಭ     ದಿನಾಂಕ : DATE : 27/11/20

# ಒಂದು ದೇಶ, ಒಂದು ಎಲೆಕ್ಷನ್ ಆಗ್ಬೇಕು: ಮೋದಿ

27/11/20

ಕೆವಾಡಿಯಾ: ಪದೇ ಪದೇ ಚುನಾವಣೆ ನಡೆಯುವುದರಿಂದ ಅಭಿವೃದ್ಧಿ ಕಾರ್ಯಗಳ ಮೇಲೆ ವ್ಯತಿರಿಕ್ತ ಪರಿಣಾಮ ಬೀರುತ್ತಿದೆ ಎಂದಿರುವ ಪ್ರಧಾನಿ ನರೇಂದ್ರ ಮೋದಿ ಒಂದು ದೇಶ, ಒಂದು ಚುನಾವಣೆ ಯೋಜನೆ ಜಾರಿ ಬಗ್ಗೆ ಮತ್ತೊಮ್ಮೆ ಪ್ರತಿಪಾದಿಸಿದ್ದಾರೆ. ಒಂದೇ ಮತದಾರರ ಪಟ್ಟಿಯ ಬಗ್ಗೆಯೂ ಬ್ಯಾಟ್ ಬೀಸಿದ್ದಾರೆ. ಶಾಸನಸಭೆಗಳ ಮುಖ್ಯಸ್ಥರ 80ನೇ ಸಮಾವೇಶದ ಸಮಾರೋಪ ಸಮಾರಂಭದಲ್ಲಿ ಮಾತನಾಡಿದ ಅವರು 'ದೇಶದ ಒಂದಲ್ಲಾ ಒಂದು ಭಾಗದಲ್ಲಿ ಕೆಲವು ತಿಂಗಳಿಗೊಮ್ಮೆ ಚುನಾವಣೆ ನಡೆಯುತ್ತಲೇ ಇರುತ್ತದೆ. ಅದರ ಪರಿಣಾಮ ಅಭಿವೃದ್ಧಿ ಕೆಲಸಗಳ ಮೇಲೆ ಆಗುತ್ತಿದೆ. ಹೀಗಾಗಿ ಒಂದು ದೇಶ, ಒಂದು ಚುನಾವಣೆ ಬಗ್ಗೆ ಆಳವಾದ ಅಧ್ಯಯನ ಮತ್ತು ಸಮಾಲೋಚನೆ ನಡೆಯಬೇಕಿದೆ' ಎಂದು ಹೇಳಿದ್ದಾರೆ. ಇದೇ ವೇಳೆ ಲೋಕಸಭೆ, ವಿಧಾನಸಭೆ ಮತ್ತು ಪಂಚಾಯತ್‌ಗೆ ಒಂದೇ ಮತದಾರರ ಪಟ್ಟಿ ರೂಪುಗೊಳ್ಳಬೇಕು. ಇದರಿಂದ ಸಮಯ ಹಾಗೂ ಹಣ ಎರಡೂ ಉಳಿಯುತ್ತದೆ ಎಂದಿದ್ದಾರೆ.